ಕರ್ನಾಟಕ ಸರ್ಕಾರ

ಕರ್ನಾಟಕ ಸರ್ಕಾರದ ಸಚಿವಾಲಯ
ವಿಧಾನಸೌಧ,
ಬೆಂಗಳೂರು, ದಿನಾಂಕ: 10.12.2021

ಸಂಖ್ಯೆ: ಸಿಆಸುಇ 45 ಸೇನಿಸಿ 2021

## ಸುತ್ತೋಲೆ

ವಿಷಯ: ಸರ್ಕಾರಿ ನೌಕರರ ಆಸ್ತಿ ಮತ್ತು ಹೊಣೆಗಾರಿಕೆಗಳ ವಿವರ ಪಟ್ಟಿಯನ್ನು ನಿಗಧಿತ ಸಮಯಕ್ಕೆ ಸಲ್ಲಿಸುವ ಬಗ್ಗೆ.

*******

ಕರ್ನಾಟಕ ನಾಗರಿಕ ಸೇವಾ (ನಡತೆ) ನಿಯಮಗಳು, 1966ರ ನಿಯಮಗಳು ಪರಿಷ್ಕೃತವಾಗಿ ಕರ್ನಾಟಕ ರಾಜ್ಯ ನಾಗರಿಕ ಸೇವಾ (ನಡತೆ) ನಿಯಮಗಳು, 2021, ದಿನಾಂಕ:07.01.2021ರಿಂದ ಜಾರಿಗೆ ಬಂದಿರುತ್ತವೆ. ಸದರಿ ನಿಯಮಗಳ ನಿಯಮ 24ರಲ್ಲಿ ಸರ್ಕಾರಿ ನೌಕರರು ಚರ/ಸ್ಥಿರ ಆಸ್ತಿ ಖರೀದಿ/ವಿಲೇ ಮಾಡುವುದಕ್ಕೆ ಸಂಬಂಧಿಸಿದಂತೆ ಉಪಬಂಧಗಳನ್ನು ಕಲ್ಪಿಸಲಾಗಿದೆ.

ಪ್ರತಿಯೊಬ್ಬ ಸರ್ಕಾರಿ ನೌಕರನು ಯಾವುದಾದರು ಸೇವೆಗೆ ಅಥವಾ ಹುದ್ದೆಗೆ ಮೊದಲು ನೇಮಕವಾಗುವಾಗ, ಆತನು ತನ್ನ ಸ್ವಂತ ಹೆಸರಿನಲ್ಲಾಗಲಿ ಅಥವಾ ತನ್ನ ಕುಟುಂಬದ ಯಾರೇ ಸದಸ್ಯರ ಹೆಸರಿನಲ್ಲಾಗಲಿ ಅಥವಾ ಯಾವುದೇ ಇತರೆ ವ್ಯಕ್ತಿಯ ಹೆಸರಿನಲ್ಲಾಗಲಿ ಪಿತ್ರಾರ್ಜಿತವಾಗಿ ಬಂದ ಸ್ವಯಂ ಅರ್ಜಿಸಿದ ಅಥವಾ ಗುತ್ತಿಗೆ ಅಥವಾ ಅಡಮಾನದ ಮೇಲೆ ತಾನು ಹೊಂದಿರುವ ಸ್ಥಿರಾಸ್ತಿಯ ಸಂಪೂರ್ಣ ವಿವರಗಳನ್ನು ನೀಡಿ, ನಿಗದಿತ ನಮೂನೆಯಲ್ಲಿ ತನ್ನ ಚರ ಮತ್ತು ಸ್ಥಿರಾಸ್ತಿಗಳ ವಿವರ ಪಟ್ಟಿಯನ್ನು ಪೂರಕ ದಾಖಲೆಗಳೊಂದಿಗೆ **ಮೂರು ತಿಂಗಳೊಳಗೆ** ಸಲ್ಲಿಸಬೇಕಾಗಿರುತ್ತದೆ. ತರುವಾಯ ಸರ್ಕಾರಿ ನೌಕರನು **ಡಿಸೆಂಬರ್ 31**ಕ್ಕೆ ಅಂತ್ಯಗೊಳ್ಳುವ ಪ್ರತಿ ಹನ್ನೆರಡು ತಿಂಗಳಿಗೊಮ್ಮೆ ತನ್ನ ಮತ್ತು ತನ್ನ ಕುಟುಂಬದ ಎಲ್ಲ ಸದಸ್ಯರ ಆಸ್ತಿಗಳ ಮತ್ತು ಹೊಣೆಗಾರಿಕೆಗಳ ವಾರ್ಷಿಕ ವಿವರ ಪಟ್ಟಿಯನ್ನು ಸಲ್ಲಿಸಬೇಕಾಗಿರುತ್ತದೆ. ಅಲ್ಲದೇ, ನಿಯಮ 24 ರಲ್ಲಿನ ಉಪಬಂಧಗಳಂತೆ ಪ್ರತಿಯೊಬ್ಬ ಸರ್ಕಾರಿ ನೌಕರನು ಚರ ಮತ್ತು ಸ್ಥಿರಾಸ್ತಿಗೆ ಸಂಬಂಧಿಸಿದಂತೆ ನಿಯಮಗಳಲ್ಲಿ ತಿಳಿಸಿರುವ ಸಂದರ್ಭಗಳಲ್ಲಿ ಅನುಮತಿ ಪಡೆಯುವುದು ಹಾಗೂ ವರದಿ ಮಾಡುವುದು ಅವಶ್ಯವಾಗಿರುತ್ತದೆ.

ಆಸ್ತಿ ಮತ್ತು ಹೊಣೆಗಾರಿಕೆ ವಿವರಗಳನ್ನು ಸಲ್ಲಿಸುವುದು ಪ್ರತಿಯೊಬ್ಬ ಸರ್ಕಾರಿ ನೌಕರನ ಕರ್ತವ್ಯವಾಗಿದ್ದು, ನಿಯಮಗಳಲ್ಲಿ ನಿಗದಿಪಡಿಸಿರುವ ಸಮಯದಲ್ಲಿ ಸಲ್ಲಿಸುವುದು ಸಹ ಅಗತ್ಯವಾಗಿರುತ್ತದೆ. ಇಲ್ಲವಾದಲ್ಲಿ ನಡತೆ ನಿಯಮಗಳಿಗೆ ವ್ಯತಿರಿಕ್ತ ನಡವಳಿಕೆ ಪ್ರದರ್ಶಿಸಿದ ಕಾರಣ ಅಂತಹ ಸರ್ಕಾರಿ ನೌಕರರ ವಿರುದ್ಧ ಶಿಸ್ತು ಕ್ರಮ ಜರುಗಿಸಲು ಅವಕಾಶವಿರುತ್ತದೆ. ಆದಾಗ್ಯೂ ಬಹುತೇಕ ಸರ್ಕಾರಿ ನೌಕರರು ತಮ್ಮ ಆಸ್ತಿ ಮತ್ತು ಹೊಣೆಗಾರಿಕೆಗಳ ವಿವರ ಪಟ್ಟಿಗಳನ್ನು ನಿಯಮಾನುಸಾರ ನಿಗದಿತ ಸಮಯಕ್ಕೆ ಸಲ್ಲಿಸದೇ ಇರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. ಆದ್ದರಿಂದ, ಎಲ್ಲಾ ನೌಕರರು ತಮ್ಮ ಚರ ಮತ್ತು ಸ್ಥಿರಾಸ್ತಿ ವ್ಯವಹರಣೆಗೆ ಸಂಬಂಧಿಸಿದಂತೆ ನಿಯಮಾನುಸಾರ ನಿಗದಿತ ಸಮಯಕ್ಕೆ ಸಲ್ಲಿಸುವಂತೆ ಸೂಚನೆ ನೀಡಲಾಗಿದೆ.

ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಯವರು ಹಾಗೂ ಇಲಾಖಾ ಮುಖ್ಯಸ್ಥರು ಮೇಲಿನ ಸೂಚನೆಗಳನ್ನು ತಮ್ಮ ಆಡಳಿತ ವ್ಯಾಪ್ತಿಗೆ ಬರುವ ಎಲ್ಲಾ ಅಧಿಕಾರಿ/ ನೌಕರರ ಗಮನಕ್ಕೆ ತರುವಂತೆ ತಿಳಿಸಲಾಗಿದೆ.

10/12/2021
(ನಾಗರತ್ನ ವಿ.ಪಾಟೀಲ್)
ಸರ್ಕಾರದ ಅಧೀನ ಕಾರ್ಯದರ್ಶಿ
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಸೇವಾ ನಿಯಮಗಳು-2)

ಇವರಿಗೆ:-
ಸಂಕಲನಕಾರರು, ಕರ್ನಾಟಕ ಇ ರಾಜ್ಯ ಪತ್ರ.

...2

ಕಾಶಿಇ/282/ಕಾನಿವ/ಆ&ಖಪಟ್ಟಿ/2021

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ:28/12/2021.

ಮೇಲ್ಕಂಡ ಸರ್ಕಾರದ ಸುತ್ತೋಲೆ (ಸಂಖ್ಯೆ:ಸಿಆಸುಇ/45/ಸೇನಿಸಿ/2021 ದಿನಾಂಕ:10/12/2021 ) ಯನ್ನು ಕೆಳಕಂಡವರ ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ ಪರಿಚಲಿಸಲಾಗಿದೆ.

ಇವರಿಗೆ: ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ.

1. ಕಾಲೇಜು ಶಿಕ್ಷಣ ಇಲಾಖೆಯ ಇಲ್ಲಾ ಪ್ರಾದೇಶಿಕ ಜಂಟಿ ನಿರ್ದೇಶಕರು, ಬೆಂಗಳೂರು, ಮೈಸೂರು, ಧಾರವಾಡ, ಶಿವಮೊಗ್ಗ, ಮಂಗಳೂರು, ಗುಲಬರ್ಗಾ ಮತ್ತು ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.
2. ಕೇಂದ್ರ ಕಛೇರಿಯ ಎಲ್ಲಾ ಅಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗದವರಿಗೆ.
3. ಮಾನ್ಯ ಆಯುಕ್ತರು/ನಿರ್ದೇಶಕರು/ಮುಖ್ಯ ಆಡಳಿತಾಧಿಕಾರಿಗಳು/ಹೆಚ್ಚುವರಿ ನಿರ್ದೇಶಕರು/ ಜಂಟಿ ನಿರ್ದೇಶಕರು ಇವರ ಆಪ್ತ ಸಹಾಯಕರುಗಳಿಗೆ.
4. ಮಾಹಿತಿ ಅಧಿಕಾರಿಗಳು, ಮಾಹಿತಿ ತಂತ್ರಜ್ಞಾನ ವಿಭಾಗ, ಕಾಲೇಜು ಶಿಕ್ಷಣ ಇಲಾಖೆ, ಕೇಂದ್ರ ಕಛೇರಿ, ಬೆಂಗಳೂರು – ಸದರಿ ಸುತ್ತೋಲೆಯನ್ನು ಇಲಾಖಾ ವೆಬ್‌ಸೈಟನಲ್ಲಿ ಪ್ರಕಟಿಸಲು.
5. ಕಛೇರಿ ಪ್ರತಿ.

ಕಾಲೇಜು ಶಿಕ್ಷಣ ನಿರ್ದೇಶಕರು.